# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಚಿಕ್ಕಮಗಳೂರು

## ನೇಮಕಾತಿ ಅಧಿಸೂಚನೆ ಸಂಖ್ಯೆ: ADMN-05/2026, ದಿನಾಂಕ: 27.06.2026

**ವಿಷಯ:** ಸೇವಕರ ಹುದ್ದೆಗಳ ನೇಮಕಾತಿ ಬಗ್ಗೆ.

**ಉಲ್ಲೇಖ:** 1. ಈ ಕಛೇರಿ ಅಧಿಸೂಚನೆ ಸಂಖ್ಯೆ: ADMN.04/2022, ದಿನಾಂಕ: 12.08.2022.

2. ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: DJA-II(LCA-II)-128/2012, ದಿನಾಂಕ: 27.01.2022.

3. ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: DJA-II(LCA-II)-128/2012, ದಿನಾಂಕ: 11.09.2023.

4. ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: DJA/712/2025, ದಿನಾಂಕ: 09.02.2026.

5. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ: 06.09.2025.

* * * *

**ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 28.07.2026**

ಚಿಕ್ಕಮಗಳೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಕೆಳಗೆ ವಿವರಿಸಿರುವಂತೆ ಖಾಲಿ ಇರುವ ಸೇವಕರ (Peon) ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಚಿಕ್ಕಮಗಳೂರು ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್ **"https://chikkamagaluru.dcourts.gov.in/notice-category/recruitments/"** ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್ ನಲ್ಲಿ ದಿನಾಂಕ: 29.06.2026 ರಿಂದ 28.07.2026 ರ ರಾತ್ರಿ 11.59 ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

## ಸೇವಕರು (Peon)

(1) ಹುದ್ದೆಗಳ ಸಂಖ್ಯೆ: 47

(2) ವೇತನ ಶ್ರೇಣಿ: 27000-650-29600-725-32500-800-35700-900-39300-1000-43300-1125-46675 ಮತ್ತು ಇತರೆ ಭತ್ಯೆಗಳು.

**(3) ಹುದ್ದೆಗಳ ವರ್ಗೀಕರಣ :**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಕ.ಮಾ.ಅ. | ಅಂ.ವಿ | ಮಾ.ಸೈ | ಯೋ.ನಿ. | ಇತರೆ (ಮೀ.ರ.) | ಒಟ್ಟು |
|---|---|---|---|---|---|---|---|---|
| ಸಾ.ಅ. | 08 | 06 | 02 | 01** | 02 | 01 | 03 | 23 |
| ಪ.ಜಾ. (ಪ್ರವರ್ಗ-ಎ) | 02 | 01 | - | - | - | - | - | 03 |
| ಪ.ಜಾ. (ಪ್ರವರ್ಗ-ಬಿ) | 02 | - | - | - | - | - | - | 02 |
| ಪ.ಜಾ. (ಪ್ರವರ್ಗ-ಸಿ) | 02*** | - | - | - | - | - | - | 02 |
| ಪ.ಪಂ. | - | 01 | - | 01** | - | - | - | 02 |
| ಪ್ರ-1 | 01 | - | - | 01** | - | - | - | 02 |
| ಪ್ರ-2 ಎ | 03 | 03* | 01 | - | - | - | - | 07 |
| ಪ್ರ-2 ಬಿ | - | - | - | 01** | - | - | - | 01 |
| ಪ್ರ-3 ಎ | - | 01 | - | 01** | - | - | - | 02 |
| ಪ್ರ-3 ಬಿ | 01 | 01 | - | 01** | - | - | - | 03 |
| **ಒಟ್ಟು** | **19** | **13** | **03** | **06** | **02** | **01** | **03** | **47** |

ಒಂದು ವೇಳೆ ಮೇಲೆ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಮಹಿಳೆ, ಲಭ್ಯವಾಗದಿದ್ದಲ್ಲಿ ಆ ಸ್ಥಾನಗಳಿಗೆ ನಿಯಮಾನುಸಾರ ಅದೇ ವರ್ಗದ ಇತರೆ ಅರ್ಹ ಪುರುಷ ಅಭ್ಯರ್ಥಿಗಳನ್ನು ಭರ್ತಿ ಮಾಡಿಕೊಳ್ಳಲಾಗುತ್ತದೆ.

ಒಂದು ವೇಳೆ ಮಾಜಿ ಸೈನಿಕರಿಗೆ/ ಯೋಜನೆಗಳಿಂದ ನಿರ್ವಸಿತರಾದವರಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಎದುರಾಗಿ ಆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಆ ರಿಕ್ತ ಸ್ಥಾನಗಳನ್ನು ಅದೇ ನೇರ ಮೀಸಲಾತಿಗೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲಾಗುತ್ತದೆ.

*** 1 ಹಿಂಬಾಕಿ ಹುದ್ದೆ: ಸೇವಕರು**

ಪ್ರವರ್ಗ -2 ಎ (ಗ್ರಾಮೀಣ ಅಭ್ಯರ್ಥಿ)

**** ಸೇವಕರು (ಅಂಗವಿಕಲ ಮೀಸಲಾತಿ)**

ಸಾ.ಅ. (ಅಂ.ವಿ) ಕಿವುಡು ಮತ್ತು ಶ್ರವಣದೋಷ
ಪ.ಪಂ. (ಅಂ.ವಿ) ದೃಷ್ಟಿಮಾಂದ್ಯ - ದೃಷ್ಟಿದೋಷ
ಪ್ರವರ್ಗ-1 (ಅಂ.ವಿ) ದೃಷ್ಟಿಮಾಂದ್ಯ - ದೃಷ್ಟಿದೋಷ
ಪ್ರ-2 ಬಿ (ಅಂ.ವಿ) ದೃಷ್ಟಿಮಾಂದ್ಯ - ದೃಷ್ಟಿದೋಷ
ಪ್ರ-3 ಎ (ಅಂ.ವಿ) ದೃಷ್ಟಿಮಾಂದ್ಯ - ದೃಷ್ಟಿದೋಷ
ಪ್ರ-3 ಬಿ (ಅಂ.ವಿ) ದೃಷ್ಟಿಮಾಂದ್ಯ – ದೃಷ್ಟಿದೋಷ

ಒಂದು ವೇಳೆ ಮೇಲ್ಕಂಡ ಅಧಿಸೂಚಿಸಿದ ಅಂಗವೈಕಲ್ಯವನ್ನುಳ್ಳ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ರಿಕ್ತಸ್ಥಾನಗಳನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲಾಗುವುದು.

**ಸೇವಕರು**

***ಪರಿಶಿಷ್ಟ ಜಾತಿ ಪ್ರವರ್ಗ-ಸಿ (ಮಹಿಳೆ) - ಒಂದು ಹುದ್ದೆಯನ್ನು ಪರಿಶಿಷ್ಟ ಜಾತಿಯ ಪ್ರವರ್ಗ-ಸಿ ಯಲ್ಲಿನ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಮೀಸಲಿರಿಸಲಾಗಿದೆ. ಒಂದು ವೇಳೆ ಈ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಸೇರಿದವರು ಲಭ್ಯವಾಗದಿದ್ದಲ್ಲಿ ಈ ಹುದ್ದೆಗಳನ್ನು ಪ್ರವರ್ಗ-ಸಿ ಯ ಇತರೆ ಜಾತಿಗಳ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ವರ್ಗೀಕರಣವನ್ನು ಈ ಕೆಳಕಂಡ ಸರ್ಕಾರಿ ಆದೇಶಗಳ ಪ್ರಕಾರ ಮಾಡಲಾಗಿದೆಃ**

1. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆಹಿಮ 95, ದಿನಾಂಕಃ 20.06.1995.
2. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆಹಿಮ 95, ದಿನಾಂಕಃ 04.01.2008.
3. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2023, ದಿನಾಂಕಃ 08.03.2023.
4. ಸರ್ಕಾರಿ ಆದೇಶ ಸಂಖ್ಯೆಃ ಸಕಇ 515 ಪಕವಿ 2026, ಬೆಂಗಳೂರು, ದಿನಾಂಕಃ 08.05.2026.
5. ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 02 ಸೇಹಿಮ 2026, ಬೆಂಗಳೂರು, ದಿನಾಂಕಃ 13.05.2026, ತಿದ್ದುಪಡಿ ಆದೇಶ ದಿನಾಂಕಃ 18.05.2026 ಮತ್ತು ಸೇರ್ಪಡೆ ಆದೇಶ ದಿನಾಂಕಃ 25.05.2026.

**(4) <u>ಶೈಕ್ಷಣಿಕ ವಿದ್ಯಾರ್ಹತೆಃ</u>**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
2. ಕನ್ನಡ ಭಾಷೆಯಲ್ಲಿ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು.

**<u>ಸೂಚನೆಃ</u>**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆ ಎಂದರೆ ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆಃ ಡಿಪಿಎಆರ್ 81 ಎಸ್ ಸಿ ಆರ್ 2017, ದಿನಾಂಕಃ 27.02.2018 ರಲ್ಲಿ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಗಳು/ಕೋರ್ಸ್ ಗಳಾಗಿರುತ್ತದೆ.

2. 10 ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿ ಅಥವಾ ಗ್ರೇಡ್ (Grade) ನಲ್ಲಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳನ್ನು ನಮೂದಿಸಿದ ಅಂಕಪಟ್ಟಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು.

**(5) <u>ವಯೋಮಿತಿ (ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಅನುಗುಣವಾಗಿ):</u>**

| | | | | |
|---|---|---|---|---|
| **<u>ಕನಿಷ್ಠ ವಯೋಮಿತಿ</u>** | **:** | 18 ವರ್ಷ | | |
| **<u>ಗರಿಷ್ಠ ವಯೋಮಿತಿ</u>** | **:** | ಸಾಮಾನ್ಯ ವರ್ಗ | - | 35 + 5* ವರ್ಷ |
| | | 2 ಎ / 2 ಬಿ / 3 ಎ / 3 ಬಿ | - | 38 + 5* ವರ್ಷ |
| | | ಪ.ಜಾ / ಪ.ಪಂ / ಪ್ರವರ್ಗ-1 | - | 40 + 5* ವರ್ಷ |

a) ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಅಂದರೆ Armed forces of the union Navy, Army, Airforce ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

*b) ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೆನೆನಿ 2025, ದಿನಾಂಕಃ 29.01.2026 ರನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one time measure) 5 ವರ್ಷಗಳ ಸಡಿಲಿಕೆ ನೀಡಲಾಗುವುದು.

**(6) <u>ಅರ್ಜಿ ಸಲ್ಲಿಸುವ ವಿಧಾನಃ</u>**

**<u>ಪಾವತಿಸಬೇಕಾದ ನಿಗದಿತ ಶುಲ್ಕ ಮತ್ತು ವಿಧಾನಃ</u>**

| | |
|---|---|
| ಸಾಮಾನ್ಯ ವರ್ಗ | ರೂ.300-00 |
| ಪ್ರವರ್ಗ-2 ಎ, 2 ಬಿ, 3 ಎ ಮತ್ತು 3 ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.150-00 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್ ಸೈಟ್ "https://chikkamagaluru.dcourts.gov.in/notice-category/recruitments/" ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ online payment through Net Banking/Credit Card/Debit Card/ UPI ಸೌಲಭ್ಯದ ಮೂಲಕ ಪಾವತಿಸತಕ್ಕದ್ದು.

ಇದನ್ನು ಹೊರತುಪಡಿಸಿ ಯಾವುದೇ ನಗದು, ಚಲನ್, ಡಿಮ್ಯಾಂಡ್ ಡ್ರಾಫ್ಟ್ : ಪೋಸ್ಟಲ್ ಆರ್ಡರ್ : ಮನಿ ಆರ್ಡರ್ ಇತ್ಯಾದಿಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಒಮ್ಮೆ ಪಾವತಿ ಮಾಡಿದ ಶುಲ್ಕವನ್ನು ಮರುಪಾವತಿ ಮಾಡಲಾಗುವುದಿಲ್ಲ. ಆದ್ದರಿಂದ ಎಲ್ಲಾ ಮಾಹಿತಿಗಳನ್ನು ಖಾತ್ರಿಪಡಿಸಿಕೊಂಡು ಅರ್ಜಿ ಸಲ್ಲಿಸತಕ್ಕದ್ದು.

**(7) <u>ಆಯ್ಕೆ ವಿಧಾನಃ</u>**

1. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ, 1977 ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮ, 1982 ಹಾಗೂ (ತಿದ್ದುಪಡಿ) ನಿಯಮಗಳು 2007 ಮತ್ತು 2021 ರ ಅನ್ವಯ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 1 ಹುದ್ದೆಗೆ 10 ಅಭ್ಯರ್ಥಿಗಳಂತೆ (1:10 ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿಃ** ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

**(8) ಪರಿವೀಕ್ಷಣಾ ಅವಧಿಃ**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸಿವಿಲ್ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ 02 ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.

**(9) ಪಿಂಚಣಿ ಸೌಲಭ್ಯಃ**

1. ಸರ್ಕಾರದ ಆದೇಶ ಸಂಖ್ಯೆ ಎಫ್.ಡಿ. (ಎಸ್.ಪಿ.ಎಲ್)/04 ಪಿ/ಇ/ಟಿ/2005, ದಿನಾಂಕಃ 31.03.2006 ಮತ್ತು ಸಂಬಂಧಿಸಿದ ಆದೇಶಗಳು.

2. ಸರ್ಕಾರದ ಆದೇಶ ಸಂಖ್ಯೆ ಆಇ 34 ಪಿಇಎನ್ 2018, ಬೆಂಗಳೂರು, ದಿನಾಂಕಃ 23.06.2018 ರಂತೆ ಮತ್ತು ಸಂಬಂಧಿಸಿದ ಆದೇಶಗಳು ಅನ್ವಯಿಸುವುದು.

**ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದರಿ ಅರ್ಜಿಯಲ್ಲಿಯೇ ತಾವು ಕ್ಲೇಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.
3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

   ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ X 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

   ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

   ಇ) ಅಭ್ಯರ್ಥಿಯು ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ X 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 25kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

5. ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಆನ್‌ಲೈನ್‌ನಲ್ಲಿ ಶುಲ್ಕವನ್ನು ಪಾವತಿಸಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ ಸಲ್ಲಿಸಲು ದಿನಾಂಕಃ 28.07.2026 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

8. ಅರ್ಹ ಅಭ್ಯರ್ಥಿಗಳಿಗೆ SMS & E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

9. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10. ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ತಿದ್ದುಪಡಿಯಾದ ನಿಯಮ 11 ರ ಪ್ರಕಾರ ಅಭ್ಯರ್ಥಿಗಳು ಯಾವುದೇ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗ ಹೊಂದಿದ್ದರೆ, ಅಂತಹ ಅಭ್ಯರ್ಥಿಗಳು ಆನ್‌ಲೈನ್ ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಹೌದು ಅಥವಾ ಇಲ್ಲ ಎಂಬುದನ್ನು ಆಯಾ ಕಾಲಂನಲ್ಲಿ ನಮೂದಿಸತಕ್ಕದ್ದು ಮತ್ತು ಅವರು ಆಯ್ಕೆಗೊಂಡ ಸಂದರ್ಭದಲ್ಲಿ ಅವರು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಒದಗಿಸತಕ್ಕದ್ದು.

11. ವಿವಿಧ ಮೀಸಲಾತಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ ಪ್ರವರ್ಗದ ಅಡಿಯಲ್ಲಿ

ಮೀಸಲಾತಿಯನ್ನು ಕ್ಲೇಮು ಮಾಡುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಹೊಂದಿರಬೇಕು.

12. ಮಾಜಿ ಸೈನಿಕರು, ವಿಧವೆಯರು ಸಕ್ಷಮ ಪ್ರಾಧಿಕಾರಿಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

13. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅಂಗವಿಕಲತೆಯ ಕುರಿತು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣ ಪತ್ರಗಳನ್ನು ಪಡೆದಿರಬೇಕು.

14. ಮೇಲ್ಕಂಡ ಕ್ರಮ ಸಂಖ್ಯೆ 11, 12 ಮತ್ತು 13 ರ ಅಡಿಯಲ್ಲಿ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

15. ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ, ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ, ಗ್ರಾಮೀಣ ಪ್ರಮಾಣಪತ್ರ, ಜಾತಿ ಪ್ರಮಾಣ ಪತ್ರಗಳ ಮೂಲ ದಾಖಲೆಗಳನ್ನು ಹಾಗೂ ಸೂಚಿಸಲ್ಪಡುವ ಇತರೇ ಮೂಲ ದಾಖಲಾತಿಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.

16. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

17. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗತಕ್ಕದ್ದು.

**ವಿಶೇಷ ಸೂಚನೆ:**

ಈ ಅಧಿಸೂಚನೆಗೆ ಸಂಬಂಧಿಸಿದಂತೆ ಹೊರಡಿಸಲಾಗುವ ನೇಮಕಾತಿ ಆದೇಶವು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2026, ಬೆಂಗಳೂರು ದಿನಾಂಕ: 27.02.2026 ರಲ್ಲಿ ತಿಳಿಸಿರುವಂತೆ ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

ಸಹಿ/-
(ರವೀಂದ್ರ ಹೆಗಡೆ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

**ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ:**

ವಿಲೇಖನಾಧಿಕಾರಿಗಳು,
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ,
ಬೆಂಗಳೂರು.

**ಅಧಿಸೂಚನೆಯ ನಕಲನ್ನು ಪ್ರಚಾರಕ್ಕಾಗಿ ಈ ಕೆಳಕಂಡವರುಗಳಿಗೆ ರವಾನಿಸಲಾಗಿದೆ:**

1. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ (ರಾಮನಗರ), ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ವಿಜಯನಗರ, ಬೀದರ್, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಕಲಬುರಗಿ, ಹಾಸನ, ಹಾವೇರಿ, ಕಾರವಾರ(ಉ.ಕ), ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು(ದ.ಕ), ಮಂಡ್ಯ, ಮೈಸೂರು, ರಾಯಚೂರು, ತುಮಕೂರು, ಶಿವಮೊಗ್ಗ, ಉಡುಪಿ ಮತ್ತು ಯಾದಗಿರಿ - **ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರದರ್ಶಿಸಲು ಕೋರಲಾಗಿದೆ.**

2. ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ನ್ಯಾಯಾಧೀಶರುಗಳಿಗೆ **(ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರದರ್ಶಿಸಲು).**

3. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು - 59.

4. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ (ಇನ್ ಫೆಂಟ್ರಿ) ಜೈನ್ ರಸ್ತೆ, ಬೆಂಗಳೂರು - 560 001.

5. ಜಿಲ್ಲಾ ವಾರ್ತಾಧಿಕಾರಿ, ವಾರ್ತಾ ಇಲಾಖೆ, ಚಿಕ್ಕಮಗಳೂರು.

6. ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಚಿಕ್ಕಮಗಳೂರು.

7. ಮುಖ್ಯ ಗ್ರಂಥಪಾಲಕರು, ಜಿಲ್ಲಾ ಗ್ರಂಥಾಲಯ, ಚಿಕ್ಕಮಗಳೂರು.

8. ನೋಡಲ್ ಅಧಿಕಾರಿ (ಮುಖ್ಯ ಆಡಳಿತಾಧಿಕಾರಿಗಳು), ಇ-ಗೆಜೆಟ್, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು - ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಗಾಗಿ.

9. ಸಾಫ್ಟ್ ವೇರ್ ಟೆಕ್ನಿಷಿಯನ್, ಕಂಪ್ಯೂಟರ್ ವಿಭಾಗ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು - ಇವರಿಗೆ ವೆಬ್‌ಹೋಸ್ಟ್ ಮಾಡುವ ಸಲುವಾಗಿ.

10. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.

11. ಕಛೇರಿ ಪ್ರತಿ.